ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜ ನಿ : ಸುಮಪ : 2020-21 ದಿನಾಂಕ: 04-08-2020

# ಪತ್ರಿಕಾ ಪ್ರಕಟಣೆ

## ಅನಧಿಕೃತ ಬಡಾವಣೆಗಳ ನಿವೇಶನ ನಿರ್ಮಾಣಕ್ಕೆ ಪರವಾನಗಿ ನೀಡಬಾರದು : ಬಿ.ಜೆ.ಪುಟ್ಟಸ್ವಾಮಿ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ) :

ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಬಡಾವಣೆಗಳ ನಿವೇಶನಗಳಿಗೆ ನಕ್ಷೆ ಮಂಜೂರಾತಿ, ಪರವಾನಗಿ ನೀಡಬಾರದೆಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೂಚಿಸಿದ್ದಾರೆ ಎಂದು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷ ಬಿ.ಜೆ. ಪುಟ್ಟಸ್ವಾಮಿ ತಿಳಿಸಿದರು.

ಅವರು ಇಂದು ವಿಕಾಸಸೌಧದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿನ ಅನಧಿಕೃತ ಬಡಾವಣೆ ಕುರಿತು ಮಾಹಿತಿ ನೀಡಲು ಹಮ್ಮಿಕೊಂಡಿದ್ದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದರು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ 172 ಖಾಸಗಿ ಸಂಸ್ಥೆಯವರು 3,109 ಎಕರೆ 27 ಗುಂಟೆ ಜಮೀನಿನಲ್ಲಿ ನಿಯಮ ಉಲ್ಲಂಘಿಸಿ ಅನಧಿಕೃತ ಬಡಾವಣೆ ನಿರ್ಮಾಣ ಮಾಡಿದ್ದು ಇದರಿಂದ ಸರ್ಕಾರಕ್ಕೆ ಕಟ್ಟಬೇಕಾದ ತೆರಿಗೆ, ಭೂ ಪರಿವರ್ತನೆ ಹಾಗೂ ಇತ್ಯಾದಿ ಸೇರಿ ಒಟ್ಟು 500 ಕೋಟಿ ಮೊತ್ತದ ತೆರಿಗೆಯನ್ನು ಸರ್ಕಾರಕ್ಕೆ ವಂಚಿಸಿದ್ದಾರೆ.

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ 800 ವೈಯಕ್ತಿಕ ಸಂಸ್ಥೆಗಳಿಂದ 5,488 ಎಕರೆ 1 ಗುಂಟೆ ಜಮೀನಿನಲ್ಲಿ ನಿರ್ಮಿಸಿರುವ ಅನಧಿಕೃತ ಬಡಾವಣೆಯಲ್ಲಿ ಭೂ ಪರಿವರ್ತನೆ, ಭೂ ಬದಲಾವಣೆ ಉಲ್ಲಂಘನೆಯಾಗಿದ್ದು, ಸರ್ಕಾರಕ್ಕೆ ಕಟ್ಟಬೇಕಾದ ತೆರಿಗೆ ಮೊತ್ತ ರೂ 185.67 ಕೋಟಿ ಸೇರಿದಂತೆ ಒಟ್ಟು 850 ಕೋಟಿಗೂ ಹೆಚ್ಚು ಹಣ ಸರ್ಕಾರಕ್ಕೆ ವಂಚನೆಯಾಗಿದೆ.

ಸಿ.ಡಿ.ಪಿ ನಕ್ಷೆಗೆ ವಿರುದ್ಧವಾಗಿ ಅನಧಿಕೃತ ಬಡಾವಣೆಗಳು ನಿರ್ಮಾಣವಾದರೆ ಸಿ.ಡಿ.ಪಿ ನಕ್ಷೆಯನ್ನು ಅನುಷ್ಠಾನ ಮಾಡಲು ಸಾಧ್ಯವಾಗುವುದಿಲ್ಲ. ಅಲ್ಲದೆ ವೈಜ್ಞಾನಿಕ ನಾಗರೀಕ ಸೌಲಭ್ಯಗಳನ್ನು ಒಳಗೊಂಡ ನಿವೇಶನಗಳನ್ನು ನಿರ್ಮಿಸಿ ಸಾರ್ವಜನಿಕರಿಗೆ ವಿತರಿಸಲು ಸಹ ಕಷ್ಟವಾಗುತ್ತದೆ.

ಈ ಕುರಿತು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಮುಖ್ಯಸ್ಥರ ಜೊತೆ ಸಭೆ ನಡೆಸಿ, ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ತಕ್ಷಣ ನಿಲ್ಲಿಸಿ  ನಿರ್ಮಾಣವಾಗಿರುವ, ನಿರ್ಮಾಣ ಹಂತದಲ್ಲಿರುವ ಅನಧಿಕೃತ ಬಡಾವಣೆಗಳನ್ನು ಸಂಪೂರ್ಣವಾಗಿ ತೆರವುಗೊಳಿಸುವ ಕ್ರಮ ಕೈಗೊಳ್ಳಲಾಗುವುದು. ಇದರಿಂದ ಅನಧಿಕೃತ ಬಡಾವಣೆಗಳಿಂದ ಸರ್ಕಾರದ ಬೊಕ್ಕಸಕ್ಕೆ ಬರಬೇಕಾದ ನೂರಾರು ಕೋಟಿ ಹಣ ವಸೂಲಿ ಮಾಡಿಬಹುದಾಗಿದೆ ಎಂದರು.

## ಸಂತಾಪ

**ಬೆಂಗಳೂರು, 03 ಆಗಸ್ಟ್ (ಕರ್ನಾಟಕ ವಾರ್ತೆ):**

ಶಿರಾ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವರಾಗಿದ್ದ ಬಿ. ಸತ್ಯನಾರಾಯಣರವರ ನಿಧನಕ್ಕೆ  ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ  ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ದಿವಂಗತರು ಸಚಿವರಾಗಿ, ಜನಪರ ಸದಸ್ಯರಾಗಿ ಅವರ ಕ್ಷೇತ್ರಕ್ಕೆ ಹಾಗೂ ರಾಜ್ಯಕ್ಕೆ ತಮ್ಮದೇ ಆದ ರೀತಿಯಲ್ಲಿ ಕೊಡುಗೆಯನ್ನು ನೀಡಿದ್ದು  ಅವರ ಅಗಲಿಕೆಯಿಂದ ಕರ್ನಾಟಕ ವಿಧಾನಸಭೆಯು ಒಬ್ಬ ಸೌಮ್ಯ, ದಕ್ಷ ಹಾಗೂ ಹಿರಿಯ ಸದಸ್ಯರೊಬ್ಬರನ್ನು ಕಳೆದುಕೊಂಡಿದೆ.

ಇವರ ನಿಧನದ ದು:ಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ಭಗವಂತನು ನೀಡಲೆಂದು ಮತ್ತು ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ಪ್ರಾರ್ಥಿಸುತ್ತೇನೆ ಎಂದು ಸಂತಾಪ ಸೂಚಿಸಿದ್ದಾರೆ.